# ಕರ್ನಾಟಕ ವಿಧಾನ ಪರಿಷತ್

ಸದಸ್ಯರ ಹೆಸರು : ಶ್ರೀ ವಿಜಯ ಸಿಂಗ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು)

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ : 693

ಉತ್ತರ ದಿನಾಂಕ : 17.09.2021

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಬೀದರ್ ಜಿಲ್ಲೆಯಲ್ಲಿ ಕಳೆದ 3 ವರ್ಷಗಳಿಂದ ಶುದ್ಧ ಕುಡಿಯುವ ನೀರಿನ ಘಟಕಕ್ಕೆ ನೀಡಿರುವ ಅನುದಾನವೆಷ್ಟು; ಹಾಗೂ ಎಷ್ಟು ಕುಡಿಯುವ ನೀರಿನ ಘಟಕವನ್ನು ಸ್ಥಾಪನೆ ಮಾಡಲಾಗಿದೆ; (ತಾಲ್ಲೂಕುವಾರು ವಿವರ ನೀಡುವುದು) | ಬೀದರ ಜಿಲ್ಲೆಗೆ ಕಳೆದ 3 ವರ್ಷಗಳಿಂದ ಶುದ್ಧ ಕುಡಿಯುವ ನೀರಿನ ಘಟಕಗಳಿಗೆ ರೂ.477.07ಲಕ್ಷಗಳ ಅನುದಾನ ನೀಡಲಾಗಿದೆ.<br><br>ಬೀದರ ಜಿಲ್ಲೆಯ ಔರಾದ(ಬಿ)-106, ಬಸವಕಲ್ಯಾಣ-65, ಭಾಲ್ಕಿ-60, ಬೀದರ್-74 ಮತ್ತು ಹುಮನಾಬಾದ-72 ತಾಲ್ಲೂಕುಗಳಿಗೆ ಹೀಗೆ ಒಟ್ಟು 377 ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸ್ಥಾಪನೆ ಮಾಡಲಾಗಿದೆ. |
| ಆ) | ಈ ಜಿಲ್ಲೆಯಲ್ಲಿ ಶುದ್ಧ ಕುಡಿಯುವ ನೀರಿನ ಘಟಕ ಸ್ಥಾಪನೆಯಾದರೂ ಹಲವಾರು ಕಾರಣಗಳಿಂದ ಅಲ್ಲಿನ ಜನತೆಗೆ ಕುಡಿಯುವ ನೀರಿನ ಸೌಲಭ್ಯ ಸಿಗದಿರಲು ಕಾರಣವೇನು? | ಬೀದರ್ ಜಿಲ್ಲೆಯಲ್ಲಿ 85 ಶುದ್ಧ ಕುಡಿಯುವ ನೀರಿನ ಘಟಕಗಳು ತಾತ್ಕಾಲಿಕವಾಗಿ ದುರಸ್ಥಿಯಲ್ಲಿವೆ. 2021-22ನೇ ಸಾಲಿನಲ್ಲಿ ದುರಸ್ಥಿ ಕಾಮಗಾರಿ ತೆಗೆದುಕೊಳ್ಳಲಾಗಿದೆ. ಕ್ರಿಯಾ ಯೋಜನೆಯು ಈಗಾಗಲೇ ಅನುಮೋದನೆಗೊಂಡಿದ್ದು, ಕೂಡಲೇ ದುರಸ್ಥಿಯಲ್ಲಿರುವ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ದುರಸ್ಥಿಪಡಿಸಿ, ಜನರಿಗೆ ಶುದ್ಧ ಕುಡಿಯುವ ನೀರನ್ನು ಒದಗಿಸಲು ಕ್ರಮ ವಹಿಸಲಾಗುತ್ತಿದೆ. |

ಸಂ:ಗ್ರಾಕುನೀ&ನೈಇ 225 ಗ್ರಾನೀಸ(4)2021

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು